## ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : 2006 (2246) |
| ಉತ್ತರಿಸಬೇಕಾದ ದಿನಾಂಕ | : 26.03.2026 |
| ಸದಸ್ಯರ ಹೆಸರು | :ಶ್ರೀ ಸೂರಜ್ ರೇವಣ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) |
| ಉತ್ತರಿಸುವ ಸಚಿವರು | :ಮಾನ್ಯ ಮುಖ್ಯಮಂತ್ರಿಯವರು |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ಕಳೆದ 2 ವರ್ಷಗಳಲ್ಲಿ ರಾಜ್ಯದಲ್ಲಿ NSS ರಾಷ್ಟ್ರ ಪ್ರಶಸ್ತಿ ಪಡೆದವರು ಎಷ್ಟು; ಸರ್ಕಾರದಿಂದ ಅವರಿಗೆ ಒದಗಿಸಲಾದ ಸೌಲಭ್ಯಗಳು ಯಾವುವು; (ಸಂಪೂರ್ಣ ಮಾಹಿತಿ ನೀಡುವುದು) | ಕಳೆದ ಎರಡು ವರ್ಷಗಳಲ್ಲಿ ಕರ್ನಾಟಕ ರಾಜ್ಯದಿಂದ ರಾಷ್ಟ್ರ ಪ್ರಶಸ್ತಿ ಪಡೆದವರ ವಿವರ ಕೆಳಕಂಡಂತಿದೆ:<br><br>**2021-22:**<br>ಅತ್ಯುತ್ತಮ ಕಾರ್ಯಕ್ರಮ ಅಧಿಕಾರಿ-1<br><br>**2022-23:**<br>ಅತ್ಯುತ್ತಮ ಕಾರ್ಯಕ್ರಮ ಅಧಿಕಾರಿ-1<br>ಅತ್ಯುತ್ತಮ ಸ್ವಯಂ ಸೇವಕ-1<br><br>2023-24 ಮತ್ತು 2024-25ನೇ ಸಾಲಿನ ಪ್ರಶಸ್ತಿಗಳಿಗೆ ಕೇಂದ್ರ ಸರ್ಕಾರದಿಂದ ಇದುವರೆಗೆ ಅರ್ಜಿ ಆಹ್ವಾನಿಸಿರುವುದಿಲ್ಲ.<br><br>ರಾಜ್ಯ ಎನ್.ಎಸ್.ಎಸ್. ಕೋಶ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ವತಿಯಿಂದ ಆಯೋಜಿಸುವ ವಾರ್ಷಿಕ ಸಭೆ/ಕಾರ್ಯಕ್ರಮಗಳಲ್ಲಿ ರಾಷ್ಟ್ರ ಪ್ರಶಸ್ತಿ ವಿಜೇತರನ್ನು ಆಹ್ವಾನಿಸಿ, ಅಭಿನಂದಿಸಲಾಗುತ್ತಿದೆ. |
| ಆ | NSS ರಾಷ್ಟ್ರ ಪ್ರಶಸ್ತಿ ಪಡೆದವರಿಗೆ ರಾಜ್ಯದಲ್ಲಿ ಟೋಲ್ ಉಚಿತವಾಗಿ ನೀಡಲಾಗುತ್ತಿದೆಯೇ; ಮತ್ತು ಅವರಿಗೆ ರಾಜ್ಯದಲ್ಲಿ ಪ್ರವಾಸ ಮಾಡಲು ಸಾರಿಗೆ ನಿಗಮಗಳಲ್ಲಿ ಉಚಿತ ಪ್ರಯಾಣ ಕಲ್ಪಿಸಲಾಗಿದೆಯೇ; ಕಲ್ಪಿಸದಿದ್ದಲ್ಲಿ ಅವರಿಗೆ ಉಚಿತ ಪ್ರಯಾಣ ಕಲ್ಪಿಸುವ ಬಗ್ಗೆ ಸರ್ಕಾರ ಚಿಂತಿಸಿದೆಯೇ; ಯಾವ ಕಾಲಮಿತಿಯೊಳಗೆ ಅವರಿಗೆ ಉಚಿತ ಪ್ರಯಾಣ ಕಲ್ಪಿಸಲು ಕ್ರಮ ಕೈಗೊಳ್ಳುವುದು; | ಪ್ರಸ್ತುತ ಎನ್.ಎಸ್.ಎಸ್. ರಾಷ್ಟ್ರ ಪ್ರಶಸ್ತಿ ಪುರಸ್ಕೃತರಿಗೆ ರಾಜ್ಯದ ಟೋಲ್ ಗಳಲ್ಲಿ ಮತ್ತು ರಾಜ್ಯದಲ್ಲಿ ಪ್ರವಾಸ ಮಾಡಲು ಸಾರಿಗೆ ನಿಗಮದ ಬಸ್‌ಗಳಲ್ಲಿ ಉಚಿತ ಪ್ರಯಾಣದ ಸೌಲಭ್ಯ ಜಾರಿಯಲ್ಲಿರುವುದಿಲ್ಲ. ಈ ವ್ಯವಸ್ಥೆಯನ್ನು ಕಲ್ಪಿಸುವ ಪ್ರಸ್ತಾವನೆಯು ಸರ್ಕಾರದ ಮುಂದಿರುವುದಿಲ್ಲ. |
| ಇ | ಅನ್ಯ ರಾಜ್ಯಗಳಲ್ಲಿ NSS ರಾಷ್ಟ್ರ ಪ್ರಶಸ್ತಿ ಪಡೆದವರಿಗೆ ಉಚಿತ ಸಾರಿಗೆ ಪ್ರಯಾಣದ ವ್ಯವಸ್ಥೆ ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; (ಸಂಪೂರ್ಣ ಮಾಹಿತಿ ನೀಡುವುದು) | ಅನ್ಯ ರಾಜ್ಯಗಳಲ್ಲಿ ಇಂತಹ ಸೌಲಭ್ಯಗಳನ್ನು ನೀಡುತ್ತಿರುವ ಬಗ್ಗೆ ಅಧಿಕೃತ ಮಾಹಿತಿಯು ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ. |

**ವೈಎಸ್‌ಡಿ-ಸಿಡಿಎನ್/149/2026**

**(ಸಿದ್ದರಾಮಯ್ಯ)**
ಮುಖ್ಯಮಂತ್ರಿ